# JSS INSTITUTE OF EDUCATION

Kowdalli, Sakaleshpur Tq, Hassan Dist - 573 134

jssioesakaleshpur jssioeskp www.jssioebedskp.org.in

**ದಿನಾಂಕ 11-08-2025 ರ ಸೋಮವಾರ ಸಕಲೇಶಪುರ ಜೆಎಸ್ಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ ರಕ್ಷಾಬಂಧನ ಉತ್ಸವವನ್ನು ಪ್ರಶಿಕ್ಷಣಾರ್ಥಿಗಳೊಂದಿಗೆ ಸಂಭ್ರಮೋಲ್ಲಾಸದಿಂದ ಆಚರಿಸಲಾಯಿತು.**

**ಪ್ರಥಮ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳನ್ನು ಎದರು ಬದರು ಕೂರಿಸಿ ಹೆಣ್ಣು ಮಕ್ಕಳಿಂದ ಗಂಡು ಮಕ್ಕಳ ಬಲಗೈಗೆ ಹಾಗೂ ಗಂಡು ಮಕ್ಕಳಿಂದ ಹೆಣ್ಣು ಮಕ್ಕಳ ಬಲಗೈಗೆ ಭ್ರಾತೃತ್ವದ ಸಂಕೇತವಾಗಿರುವ ರಾಖಿಯನ್ನು ಕಟ್ಟಿಸುವುದರ ಮೂಲಕ ರಾಖಿ ಹಬ್ಬವನ್ನು ಅಚರಣೆ ಮಾಡಲಾಯಿತು.**



**ಸಹಾಯಕ ಪ್ರಾಧ್ಯಾಪಕರಾದ ಡಾ. ವಿಕ್ರಮ್ ಸಿ.ಬಿ ರವರು ಮಾತನಾಡುತ್ತಾ,** ಹಬ್ಬಗಳ ತವರೂರಾದ ಭಾರತ ದೇಶದಲ್ಲಿ ಹಬ್ಬ ಹರಿದಿನಗಳಿಂದ ಕೂಡಿದ ಶ್ರಾವಣ ಮಾಸಕ್ಕೆ ವಿಶೇಷ ಮಹತ್ವ ಇದೆ. ಶ್ರಾವಣದಲ್ಲಿ ಬರುವ "ನೂಲಹುಣ್ಣಿಮೆ" ಅಥವಾ `ರಕ್ಷಾಬಂಧನ' ಒಂದು ಪ್ರಮುಖ ಹಬ್ಬವಾಗಿದೆ ರಕ್ಷಾ ಬಂಧನ ಭಾರತದ ಸಂಸ್ಕಂತಿ ಮತ್ತು ಮಾನವೀಯ ಮೌಲ್ಯಗಳನ್ನು ಎತ್ತಿ ತೋರಿಸುವ, ಅನೇಕ ಆಧ್ಯಾತ್ಮಿಕ ರಹಸ್ಯಗಳನ್ನು ಬೆಳಗಿಸುವ ಮತ್ತು ಸಾರ್ವತ್ರಿಕ ಸಹೋದರ-ಸಹೋದರಿ ಸಂಬಂಧವನ್ನು ನಮಗೆ ನೆನಪಿಸುವ ಕೊಡುಗೆಯಾಗಿದೆ ಎಂದು ತಿಳಿಸಿದರು.

**ಕಾಲೇಜಿನ ಪ್ರಾಂಶುಪಾಲರಾದ ಡಾ. ನಂಜುಂಡಪ್ಪ ಎಸ್ ರವರು ಮಾತನಾಡುತ್ತಾ,** ರಕ್ಷಾಬಂಧನ ಹಬ್ಬವು ಪ್ರಾಚೀನ ಕಾಲದಿಂದ ನಡೆದು ಬಂದ ಹಬ್ಬವಾಗಿದ್ದು ವಿಶ್ವಕ್ಕೆ ಸ್ನೇಹ ಮತ್ತು ಮಮತೆಯ ಸಂದೇಶ ನೀಡುತ್ತದೆ. 4-5 ನಿಮಿಷಗಳಲ್ಲಿ ಮುಗಿಯುವ ರಾಖಿ ಕಟ್ಟುವ ಈ ಕಾರ್ಯಕ್ರಮ ಸೋದರ-ಸೋದರಿಯ ಸಂಬಂಧವನ್ನು ಗಟ್ಟಿಗೊಳಿಸುತ್ತದೆ. ಈ ಮಧುರ ಸಂಬಂಧ ಉಸಿರು ಇರುವವರೆಗೂ ಇರುತ್ತದೆ. ಕಟ್ಟಿರುವ ದಾರ ಹೋದರೂ ಹೃದಯದಲ್ಲಿ ಇರುವ ಸ್ನೇಹ ದೃಢವಾಗಿರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಸಿಬ್ಬಂದಿ ವರ್ಗದವರು ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

**For college related queries and more information Contact:**

+91 99013 13458, +91 94484 64413